# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 239 | Pages. 2 | Date: 03-09-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 239 - ಪುಟಗಳು : 2 | 03-09-2026 ಗುರುವಾರ | Ph: 8762954248 | ದರ : ₹1


# ಮಹಿಳೆಯರು ನಾಯಕತ್ವ ಗುಣ ಬೆಳೆಸಿಕೊಳ್ಳಿ

## ಸರ್ಕಾರಿ ನೌಕರರ ಸಂಘದ ರಾಜಾಧ್ಯಕ್ಷ ಷಡಕ್ಷರಿ ಕರೆ I ಜಿಲ್ಲಾ ಮಹಿಳಾ ಘಟಕ ಉದ್ಘಾಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಿಳಾ ನೌಕರರು ಕೇವಲ ಕಚೇರಿ ಹಾಗೂ ಕುಟುಂಬದ ಜವಾಬ್ದಾರಿಗಳಿಗೆ ಸೀಮಿತರಾಗದೆ ಸಂಘಟನೆಗಳಲ್ಲೂ ಸಕ್ರಿಯವಾಗಿ ತೊಡಗಿಸಿಕೊಂಡು ನಾಯಕತ್ವ ವಹಿಸಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಕರೆ ನೀಡಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಜಿಲ್ಲಾ ಘಟಕದ ಉದ್ಘಾಟನೆ, ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಕಾನೂನು ಜಾಗೃತಿ ಮತ್ತು ಆರೋಗ್ಯ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರ್ಕಾರಿ ನೌಕರರ ಸಂಘದಲ್ಲಿ ಮಹಿಳೆಯರಿಗೆ ಅವಕಾಶ ನೀಡಲಾಗಿಲ್ಲ ಎಂಬ ಆರೋಪ ಸರಿಯಲ್ಲ. ಮಹಿಳೆಯರಿಗೆ ಅವಕಾಶ ಕಲ್ಪಿಸಲಾಗಿದ್ದು, ಅದನ್ನು ಬಳಸಿಕೊಂಡು ಸಂಘಟನೆ ಮುಂಚೂಣಿಗೆ ಬರಬೇಕಿದೆ. ಮಹಿಳೆಯರು ತಮ್ಮ ಸಾಮರ್ಥ್ಯ ಮತ್ತು ನಾಯಕತ್ವವನ್ನು ಮನೆ ಹಾಗೂ ಕಚೇರಿಗೆ ಮಾತ್ರ ಸೀಮಿತಗೊಳಿಸಿಕೊಳ್ಳಬಾರದು. ಸಂಘಟನೆಯ ಸಾಮಾಜಿಕ ಮತ್ತು ಸಾರ್ವಜನಿಕ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ತಿಳಿ ಹೇಳಿದರು.

ಮಹಿಳೆಯರ ಭಾಗವಹಿಸುವಿಕೆ ಹೆಚ್ಚಾದಾಗ ಮಾತ್ರ ಸಂಘಟನೆ ಮತ್ತಷ್ಟು ಬಲಿಷ್ಠವಾಗಲಿದೆ. ಮಹಿಳೆಯರಿಗೆ ಸಂಘಟನೆಯಲ್ಲಿ ಹೆಚ್ಚಿನ ಅವಕಾಶ ಕಲ್ಪಿಸುವ ಉದ್ದೇಶದಿಂದ ತಮ್ಮ ಅಧಿಕಾರಾವಧಿಯಲ್ಲಿ ಹಲವು ಮಹತ್ವದ ಕ್ರಮ ಕೈಗೊಳ್ಳಲಾಗಿದೆ. ಚುನಾವಣೆ ಮೂಲಕ ಮಹಿಳೆಯರು ಆಯ್ಕೆಯಾಗಲು ಸಾಧ್ಯವಾಗದಿದ್ದಾಗಲೂ ಪ್ರತಿ ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ವಿವಿಧ ಇಲಾಖೆಗಳ ಕನಿಷ್ಠ 20 ಸಕ್ರಿಯ ಮಹಿಳಾ ಪ್ರತಿನಿಧಿಗಳನ್ನು ಗುರುತಿಸಿ ಅವರಿಗೆ ಸಂಘಟನಾ ಜವಾಬ್ದಾರಿ ನೀಡುವಂತೆ ಬೈಲಾ ರೂಪಿಸಲಾಗಿದೆ ಎಂದು ಹೇಳಿದರು.

ಮಹಿಳೆಯರ ನಡುವೆ ಟೀಕೆ-ಟಿಪ್ಪಣಿ ಇರುವುದು ಸಹಜ. ಆದರೆ ಟೀಕೆಗಳಿಂದ ಕೆಲಸ ನಿಲ್ಲಬಾರದು. ಮಹಿಳೆಯರು ಸಂಘಟನೆಯಲ್ಲಿ ಜವಾಬ್ದಾರಿ ವಹಿಸಿಕೊಂಡು ತಮ್ಮ ಸಾಮರ್ಥ್ಯ ಸಾಬೀತು ಪಡಿಸಬೇಕು ಎಂದ ಅವರು, ಸರ್ಕಾರಿ ನೌಕರರ ಸಂಘದ ಇತಿಹಾಸದಲ್ಲಿ ಮಹಿಳಾ ನಾಯಕತ್ವಕ್ಕೆ ವಿಶೇಷ ಸ್ಥಾನವಿದೆ. ಮೇರಿ ದೇವಾಸಿಯಾ ಅವರ ಅಚಲ ಹೋರಾಟ ಗುಣಗಳನ್ನು ಇಂದಿನ ಮಹಿಳಾ ನೌಕರರು ಮುಂದುವರಿಸಬೇಕು ಎಂದು ಕರೆ ನೀಡಿದರು.

ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ರಾಜ್ಯಾಧ್ಯಕ್ಷೆ ಡಾ.ಸಿ.ವಿ. ಶೈಲಜಾ ಮಾತನಾಡಿ, ಪುರುಷರು ಮತ್ತು ಮಹಿಳೆಯರು ಸಮಾನವಾಗಿ ಜೊತೆಯಾಗಿ ಸಾಗಬೇಕು. ಮಹಿಳೆಯರ ಸಂಕಷ್ಟಗಳಿಗೆ ನೆರವಾಗುವ ಉದ್ದೇಶದಿಂದ ಸಂಘಟನೆ ಕಟ್ಟಲಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ಕೆ.ಎಂ. ಶ್ರೀನಿವಾಸ್, ಸಂಘದ ಜಿಲ್ಲಾ ಅಧ್ಯಕ್ಷೆ ಕೆ.ವೀಣಾ, ಪ್ರಧಾನ ಕಾರ್ಯದರ್ಶಿ ಶೈಲಾ, ರಾಜ್ಯ ಖಜಾಂಚಿ ಕವಿತಾ ನಾಗರಾಜು, ವಕೀಲೆ ಗಿರಿಜಾಂಬಿಕೆ, ಗೌರವಾಧ್ಯಕ್ಷೆ ಡಾ. ಅನುಪಮ, ಉಪಾಧ್ಯಕ್ಷ ಶಿವಸ್ವಾಮಿ, ಸಂಘಟನಾ ಕಾರ್ಯದರ್ಶಿ ಜಿ.ಪಿ. ವಿಶ್ವನಾಥ್, ಟಿ. ರಾಜು, ಎಸ್. ಮಧು, ರಾಜ್ಯ ಕಾರ್ಯದರ್ಶಿ ಸಿ.ಕೆ. ರಘು, ಪ್ರಸನ್ನಕುಮಾರ್, ತಮ್ಮಣ್ಣಶೆಟ್ಟಿ, ಓಂಕಾರಮೂರ್ತಿ, ಬಿ.ಎನ್. ಆನಂದ್, ದಾಕ್ಷಾಯಿಣಿ, ಜಿಲ್ಲಾ ಖಜಾಂಚಿ ಪುಷ್ಪ, ಉಪಾಧ್ಯಕ್ಷೆ ಬಿ.ಎಂ. ಶೃತಿ, ಕ್ರೀಡಾ ಕಾರ್ಯದರ್ಶಿ ಯಶೋಧ ಇದ್ದರು. ಲಕ್ಷ್ಮೀನಾರಾಯಣ್ ನಿರೂಪಿಸಿದರೆ ಎಂ. ಕಲಾ ಪ್ರಾರ್ಥಿಸಿದರು. ಪ್ರಧಾನ ಕಾರ್ಯದರ್ಶಿ ಕಲಾವತಿ ಸ್ವಾಗತಿಸಿದರು.



### ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ಸಿಗಲಿ

ಬೇಲೂರು ಶಾಸಕ ಎಚ್.ಕೆ. ಸುರೇಶ್ ಮಾತನಾಡಿ, ಮಹಿಳೆಯರು ಇಂದು ಆರ್ಥಿಕವಾಗಿ, ಸಾಮಾಜಿಕವಾಗಿ ಎಲ್ಲ ಕ್ಷೇತ್ರಗಳಲ್ಲೂ ಮುನ್ನಡೆಯುತ್ತಿದ್ದಾರೆ. ಆದರೆ ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಇನ್ನಷ್ಟು ಹೆಚ್ಚಬೇಕಿದೆ ಎಂದರು. ಮಹಿಳಾ ನೌಕರರಿಗೆ ಋತುಚಕ್ರ ರಜೆ ನೀಡುವ ವಿಚಾರವನ್ನು ಸದನದಲ್ಲಿ ಪ್ರಸ್ತಾಪಿಸಿ,

ಈ ಕುರಿತು ನಿರ್ಣಯ ಕೈಗೊಂಡು ಸರ್ಕಾರಕ್ಕೆ ಕಳುಹಿಸುವ ಅವಕಾಶ ತಮಗೆ ದೊರೆತಿರುವುದು ಸಂತೋಷದ ಸಂಗತಿ. ಇದಕ್ಕೆ ರಾಜ್ಯಾಧ್ಯಕ್ಷ ಷಡಕ್ಷರಿ ಅವರ ಸಹಕಾರವೂ ಕಾರಣ ಎಂದು ಹೇಳಿದರು.

# ಬೇಲೂರು ಬರಪೀಡಿತ ಪಟ್ಟಿಗೆ ಸೇರಿಸಲು ಆಗ್ರಹಿಸಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಳೇಬೀಡು: ತೀವ್ರ ಬರದಿಂದ ಬಳಲುತ್ತಿರುವ ಬೇಲೂರು ತಾಲ್ಲೂಕನ್ನು ಬರ ಪೀಡಿತ ಪಟ್ಟಿಗೆ ಸೇರಿಸುವ ಬದಲು ಶಾಸಕ ಹೆಚ್.ಕೆ.ಸುರೇಶ್ ಹಾಗೂ ಮಾಜಿ ಸಚಿವ ಬಿ.ಶಿವರಾಂ ಪರಸ್ಪರ ವಾಕ್ಸಮರದಲ್ಲಿ ತೊಡಗಿ ಜನರನ್ನು ಸಂಕಷ್ಟಕ್ಕೆ ದೂಡಿದ್ದಾರೆ ಎಂದು ಆರೋಪಿಸಿ ಬುಧವಾರ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಪ್ರತಿಭಟನೆ ನಡೆಸಲಾಯಿತು.

ಹೊಯ್ಸಳ ವೃತ್ತದಿಂದ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು ನಾಡಕಚೇರಿ ಎದುರು ಜಮಾಯಿಸಿ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು.

ರೈತ ಸಂಘ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ ಮಾತನಾಡಿ, ಬೇಲೂರು, ಆಲೂರು, ಸಕಲೇಶಪುರ ತಾಲ್ಲೂಕುಗಳು ಬರ ಪೀಡಿತ ಪಟ್ಟಿಯಿಂದ ವಂಚಿವಾಗಿರುವುದು ಯಕ್ಷ ಪ್ರಶ್ನೆಯಾಗಿದೆ. ಮೂರು ತಾಲ್ಲೂಕುಗಳಿಗೆ ಬಿಜೆಪಿ ಶಾಸಕರು ಇರುವುದರಿಂದ ಬರಪೀಡಿತ ಘೋಷಣೆಗೆ ಸರ್ಕಾರ ಹಿಂದೇಟು ಹಾಕಿರಬಹುದು. ಬೇಲೂರು, ಸಕಲೇಶಪುರ ಶಾಸಕರು ಸರ್ಕಾರದ ವಿರುದ್ಧ ಹೋರಾಟ ಮಾಡಬೇಕು. ದಕ್ಷತೆಯಿಂದ ಇಬ್ಬರು ಶಾಸಕರು ಧ್ವನಿ ಎತ್ತದಿದ್ದರೆ ನಿಮ್ಮನ್ನು ಎಳೆದು ತಂದು ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.



ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಜಿಲ್ಲೆಯಾದ್ಯಂತ ಬರ ಅಧ್ಯಯನ ನಡೆಸಿ ವಾಸ್ತವ ಸ್ಥಿತಿ ವಿಕ್ಷಿಸಿದರೂ 3 ತಾಲ್ಲೂಕುಗಳು ಬರಪಟ್ಟಿಗೆ ಸೇರದೆ ಇರುವುದು ಏಕೆ ಎಂದು ಪ್ರಶ್ನಿಸಿದರು.

ರೈತ ಸಂಘ ಹೋಬಳಿ ಅಧ್ಯಕ್ಷ ಎಲ್.ಈ. ಶಿವಪ್ಪ ಮಾತನಾಡಿ, ಜಿಲ್ಲೆಯಲ್ಲಿ 11048 ರೈತರು 32 ಕೋ. ರೂ. ಬೆಳೆ ವಿಮೆ ಪಾವತಿಸಿದ್ದಾರೆ. ಬರಗಾಲದಿಂದ ಬೆಳೆ ನಷ್ಟವಾದರೂ ರೈತರಿಗೆ ಬಿಡಿಗಾಸು ಬಂದಿಲ್ಲ. ಸಂಸದ ಶ್ರೇಯಸ್ ಪಟೇಲ್ ಹೊಳೆನರಸೀಪುರ ಹಿತಕ್ಕಾಗಿ ಮಾತ್ರ ಶ್ರಮಿಸುತ್ತಿದ್ದಾರೆ. ಹಾಸನ ಲೋಕಸಭಾ ಕ್ಷೇತ್ರಕ್ಕೆ ಸದಸ್ಯನಾಗಿದ್ದೇನೆಂಬುದನ್ನು ಮರೆತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಟಿ.ಬಿ.ಹಾಲಪ್ಪ ಮಾತನಾಡಿ, ಹಳೇಬೀಡು ಹೋಬಳಿಯಲ್ಲಿ ಮಳೆ ಕೊರತೆಯಾಗಿದೆ ಎಂಬುದಕ್ಕೆ ದಾಖಲೆ ಇದ್ದರೂ ಬೇಲೂರು ತಾಲ್ಲೂಕು ಬರಪ್ರದೇಶಕ್ಕೆ ಸೇರಿಲ್ಲ ಎಂದರು. ಉಪ ತಹಶೀಲ್ದಾರ್ ಭೋಜೇಂದ್ರಪ್ಪ ಮನವಿ ಸ್ವೀಕರಿಸಿದರು.

ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಪ್ರಕಾಶ್, ಹಾಸನ ತಾಲ್ಲೂಕು ಅಧ್ಯಕ್ಷ ಮುಂಜುನಾಥ ಮುಖಂಡರಾದ ಅಂದಾಲೆ ಪರಮೇಶ್, ರಾಜಗೆರೆ ಗಂಗಾಧರಪ್ಪ, ತಟ್ಟೆಹಳ್ಳಿ ಶಿವಕುಮಾರ್, ಶ್ರೀನಿವಾಸ, ಅಡುಗೆ ರಾಜು, ಮುನ್ನಾಬಾಯ್, ಕೆ.ಆರ್.ಮಹಾಲಕ್ಷ್ಮಿ ಮತ್ತಿತರರಿದ್ದರು.

# ಚೌಡೇನಹಳ್ಳಿಯಲ್ಲಿ ಕೃಷಿ ಕಾರ್ಯಾನುಭವ ಶಿಬಿರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಜೈವಿಕ ಇಂಧನ ಬೆಳೆಗಳ ಕೃಷಿಯು ರೈತರಿಗೆ ಪರ್ಯಾಯ ಆದಾಯದ ಮೂಲವಾಗುವುದರ ಜೊತೆಗೆ ಪರಿಸರ ಸಂರಕ್ಷಣೆಗೂ ಸಹಕಾರಿಯಾಗಿದೆ ಎಂದು ಮಡೆನೂರು ಜೈವಿಕ ಇಂಧನ ಉದ್ಯಾನವನದ ಕ್ಷೇತ್ರ ಅಧಿಕಾರಿ ಬಸವರಾಜು ತಿಳಿಸಿದರು.

ಹಾಸನದ ಕಾರೆಕೆರೆ ಕೃಷಿ ಮಹಾವಿದ್ಯಾಲಯದ ಬಿಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ತಾಲ್ಲೂಕಿನ ಚೌಡೇನಹಳ್ಳಿಯಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದಲ್ಲಿ ಜೈವಿಕ ಇಂಧನ ಬೆಳೆಗಳ ಮಹತ್ವ ಕುರಿತ ಮಾಹಿತಿ ಕಾರ್ಯಾಗಾರದಲ್ಲಿ ಮಾತನಾಡಿ, ಜೈವಿಕ ಇಂಧನ ಬೆಳೆಗಳ ಮಹತ್ವ, ಅವುಗಳ ಕೃಷಿ ವಿಧಾನ, ಬಳಕೆ ಹಾಗೂ ಇಂಧನ ಉತ್ಪಾದನೆಯಲ್ಲಿ ಅವುಗಳ ಪಾತ್ರದ ಕುರಿತು ವಿವರಿಸಿದರು. ಕೃಷಿ ಅವಶೇಷಗಳು ಹಾಗೂ ವಿವಿಧ ಸಸ್ಯ ಮೂಲಗಳನ್ನು ಸದುಪಯೋಗಪಡಿಸಿಕೊಂಡು ಜೈವಿಕ ಇಂಧನ ಉತ್ಪಾದಿಸುವ ಮೂಲಕ ತ್ಯಾಜ್ಯ ನಿರ್ವಹಣೆಯ ಜೊತೆಗೆ ಪರ್ಯಾಯ ಇಂಧನ ಮೂಲಗಳನ್ನು ಅಭಿವೃದ್ಧಿಪಡಿಸಬಹುದು ಎಂದರು.

ಸಂಪನ್ಮೂಲ ವ್ಯಕ್ತಿ ರಘು ಮಾತನಾಡಿ, ಉದ್ಯಾನವನದಲ್ಲಿ ಲಭ್ಯವಿರುವ ವಿವಿಧ ಜೈವಿಕ ಇಂಧನ ಬೆಳೆಗಳು ಹಾಗು ಅವುಗಳಿಂದ ದೊರೆಯುವ ಉಪ ಉತ್ಪನ್ನಗಳ ಕುರಿತು ಮಾಹಿತಿ ನೀಡಿದರು. ಜೈವಿಕ ಇಂಧನ ಬೆಳೆಗಳ ವೈವಿಧ್ಯ, ಉಪಯೋಗ ಮತ್ತು ರೈತರಿಗೆ ದೊರೆಯಬಹುದಾದ ಪ್ರಯೋಜನಗಳ ಬಗ್ಗೆ ವಿವರಿಸಿದರು.

ಜೈವಿಕ ಇಂಧನವು ಸಾಂಪ್ರದಾಯಿಕ ಇಂಧನ ಮೂಲಗಳಿಗೆ ಪರ್ಯಾಯವಾಗಿದ್ದು, ಭವಿಷ್ಯದಲ್ಲಿ ಬೇಡಿಕೆ ಹೆಚ್ಚುವ ಸಾಧ್ಯತೆಯಿದೆ. ರೈತರು ಜೈವಿಕ ಇಂಧನ ಬೆಳೆಗಳ ಬಗ್ಗೆ ಹೆಚ್ಚಿನ ಮಾಹಿತಿ ಪಡೆದು, ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಬೆಳೆ ಬೆಳೆಯುವತ್ತ ಗಮನಹರಿಸಬೇಕು ಎಂದರು.

ಒಟ್ಟು 83 ಗ್ರಾಮಸ್ಥರು ಭಾಗವಹಿಸಿದ್ದರು.

# ಘನತೆಯ ಬದುಕು ಎಲ್ಲರ ಹಕ್ಕು: ಜಿಲ್ಲಾಧಿಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಲ್ಲರಿಗೂ ಘನತೆಯಿಂದ ಬದುಕುವ ಹಕ್ಕಿದ್ದು ನಾವು ಮಾಡುವ ಕೆಲಸದಿಂದ ವ್ಯಕ್ತಿತ್ವ ಅಳೆಯಬಾರದು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲಾ ಪೌರ ಕಾರ್ಮಿಕರೊಂದಿಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಬುಧವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಗರವನ್ನು ಸ್ವಚ್ಛ, ಆರೋಗ್ಯ ಮತ್ತು ಸುಂದರವಾಗಿಡುವಲ್ಲಿ ಪೌರ ಕಾರ್ಮಿಕರ ಕೊಡುಗೆ ಅತ್ಯಮೂಲ್ಯವಾಗಿದ್ದು, ಅವರು ಯೋಧರಷ್ಟೇ ಶ್ರೇಷ್ಠರು. ಪೌರ ಕಾರ್ಮಿಕರ ಕಠಿಣ ಪರಿಶ್ರಮದಿಂದಲೇ ಸಮಾಜ ಸ್ವಚ್ಛ ಹಾಗೂ ಆರೋಗ್ಯಕರವಾಗಿರಲು ಸಾಧ್ಯವಾಗಿದೆ. ತಮ್ಮ ಆರೋಗ್ಯ ಮತ್ತು ಜೀವನವನ್ನೇ ಪಣಕ್ಕಿಟ್ಟು ಕರ್ತವ್ಯ ನಿರ್ವಹಿಸುವ ಪೌರ ಕಾರ್ಮಿಕರ ಸೇವೆಯನ್ನು ಎಲ್ಲರೂ ಗೌರವಿಸಬೇಕು. ಅವರಿಗೆ ಆರ್ಥಿಕ ಹಾಗು ಸಾಮಾಜಿಕ ಭದ್ರತೆ ಕಲ್ಪಿಸುವುದು ಅಗತ್ಯ. ಅವರನ್ನು ಸಮಾಜ ಉತ್ತಮ ಸ್ಥಾನದಲ್ಲಿ ಕಾಣುವಂತಾಗಬೇಕು. ಸಂವಿಧಾನ ಎಲ್ಲರಿಗೂ ಸಮಾನ ಅವಕಾಶ ನೀಡಿದ್ದು, ಪೌರ ಕಾರ್ಮಿಕರ ಸಬಲೀಕರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದರು.




ಪೌರ ಕಾರ್ಮಿಕರಿಗೆ ಸಂಕಷ್ಟ ಭತ್ಯೆ, ಸಮವಸ್ತ್ರ, ಗೃಹ ಭಾಗ್ಯ ಯೋಜನೆಯಡಿ ನಿವೇಶನ, ಇಎಸ್ಐ, ಪಿಎಫ್, ಎನ್ ಪಿಎಸ್ ಕಾರ್ಡ್, ಆರೋಗ್ಯ ತಪಾಸಣೆ, ಸುರಕ್ಷತಾ ಪರಿಕರ ಹಾಗು ವಿಮೆ ಸೇರಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ಪೌರ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಯಾವ ಕಾರಣಕ್ಕೂ ಸುರಕ್ಷತೆಯಲ್ಲಿ ರಾಜಿ ಮಾಡಿಕೊಳ್ಳಬಾರದು. ಮಾದಕ ವ್ಯಸನಗಳಿಂದ ದೂರವಿದ್ದು, ಶಿಸ್ತು ಮತ್ತು ಗೌರವಯುತವಾಗಿ ಬದುಕಬೇಕು. ಪ್ರತಿಯೊಬ್ಬರಿಗೂ ಉತ್ತಮ ಬದುಕು ಕಟ್ಟಿಕೊಳ್ಳುವ ಅರ್ಹತೆ ಇದೆ. ಪೌರ ಕಾರ್ಮಿಕರಿಗೆ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಿಕೊಡಬೇಕು. ವಸತಿ ರಹಿತರ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಸೌಲಭ್ಯಗಳನ್ನು ಒದಗಿಸುವಾಗ ಪೌರ ಕಾರ್ಮಿಕರಿಗೆ ಆದ್ಯತೆ ನೀಡಲಾಗುವುದೆಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್, ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ, ನಗರಾಡಳಿತ ನಿರ್ದೇಶಕ ರುದ್ರಮುನಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪಿ.ದೂದಪೀರ್, ಮಹಾನಗರ ಪಾಲಿಕೆ ಪೌರಾಯುಕ್ತ ಆರ್. ಕೃಷ್ಣಮೂರ್ತಿ ಸೇರಿದಂತೆ ಅಧಿಕಾರಿಗಳು ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

### ನಿವೇಶನಕ್ಕಾಗಿ ಮುಖಂಡ ಶಂಕರ್‌ರಾಜ್ ಮೊರೆ

ಮುಖಂಡ ಶಂಕರ್ ರಾಜ್ ಮಾತನಾಡಿ, ನಗರದಲ್ಲಿ 41 ಕಾರ್ಮಿಕರು ವೈಯಕ್ತಿಕ ವಸತಿ ಯೋಜನೆಯಡಿ ಕನಿಷ್ಟ 3 ರಿಂದ 4 ಲ.ರೂ. ವೆಚ್ಚ ಮಾಡಿ ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಆದರೆ ಅಗತ್ಯ ಮೂಲ ಸೌಕರ್ಯಗಳ ಕೊರತೆಯಿಂದ ತೊಂದರೆ ಅನುಭವಿಸುತ್ತಿದ್ದಾರೆ. ಎರಡನೇ ಹಂತದ ಪೌರ ಕಾರ್ಮಿಕರಿಗೆ ಇನ್ನೂ ನಿವೇಶನ ನೀಡಿಲ್ಲ. ತಾಲ್ಲೂಕುಗಳಲ್ಲಿಯೂ ನಿವೇಶನ ನೀಡುವ ಕಾರ್ಯವಾಗಿಲ್ಲ. ಅಧಿಕಾರಿಗಳು ಮನಸ್ಸು ಮಾಡಿದರೆ ಒಂದು ವಾರದಲ್ಲೇ ನಿವೇಶನ ಒದಗಿಸಬಹುದು. ಪೌರ ಕಾರ್ಮಿಕರ ವಿಚಾರದಲ್ಲಿ ರಾಜಕಾರಣ ಬೆರೆಸಬಾರದು ಎಂದು ಮನವಿ ಮಾಡಿದರು.

# ಹಾನುಬಾಳುವಿನಲ್ಲಿ ನಾರಾಯಣ ಗುರು ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಮಾಜದಲ್ಲಿದ್ದ ಅಸಮಾನತೆ, ಮೂಢನಂಬಿಕೆ ಹಾಗೂ ಸಾಮಾಜಿಕ ತಾರತಮ್ಯದ ವಿರುದ್ಧ ಹೋರಾಡಿ ಶಿಕ್ಷಣ ಮತ್ತು ಸಂಘಟನೆಯ ಮೂಲಕ ಸಮಾಜದ ಪ್ರಗತಿಗೆ ಹೊಸ ದಿಕ್ಕು ತೋರಿದ ಬ್ರಹ್ಮಶ್ರೀ ನಾರಾಯಣ ಗುರುಗಳು ಮಹಾನ್ ಸಮಾಜ ಸುಧಾರಕರಾಗಿದ್ದಾರೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಹಾನುಬಾಳುವಿನಲ್ಲಿ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣ ಗುರುಗಳ 172ನೇ ಜಯಂತ್ಯುತ್ಸವದಲ್ಲಿ ಮಾತನಾಡಿ, ನಾರಾಯಣ ಗುರುಗಳ ಒಂದೇ ಜಾತಿ, ಒಂದೇ ಮತ, ಒಂದೇ ದೇವರು ಎಂಬ ಸಂದೇಶ ಇಂದಿಗೂ ಪ್ರಸ್ತುತವಾಗಿದ್ದು, ಸಮಾನತೆಯ ಸಮಾಜ ನಿರ್ಮಾಣಕ್ಕೆ ದಾರಿದೀಪವಾಗಿದೆ ಎಂದರು.

ಜಾತಿ, ಮತ ಹಾಗೂ ಧರ್ಮದ ಭೇದಗಳನ್ನು ಮೀರಿ ಎಲ್ಲರೂ ಸಹೋದರತ್ವ ಮತ್ತು ಸಮಾನತೆಯಿಂದ ಬದುಕಬೇಕು. ನಾರಾಯಣ ಗುರುಗಳ ಆದರ್ಶಗಳನ್ನು ಕೇವಲ ಜಯಂತಿ ಆಚರಣೆಗೆ ಸೀಮಿತಗೊಳಿಸದೆ, ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಆಗ ಮಾತ್ರ ಅವರ ಜಯಂತಿ ಆಚರಣೆಗೆ ನಿಜವಾದ ಅರ್ಥ ದೊರೆಯಲಿದೆ ಎಂದು ಹೇಳಿದರು.



ವಿದ್ಯಾವಂತರಾಗಿರಿ, ಸಂಘಟಿತರಾಗಿರಿ ಎಂಬ ನಾರಾಯಣ ಗುರುಗಳ ಸಂದೇಶವನ್ನು ಯುವಜನತೆ ಗಂಭೀರವಾಗಿ ಪರಿಗಣಿಸಬೇಕು. ಶಿಕ್ಷಣವೇ ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿಗೆ ಪ್ರಮುಖ ಸಾಧನವಾಗಿದೆ. ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಅವರನ್ನು ಸಮಾಜದ ಆಸ್ತಿಯನ್ನಾಗಿ ರೂಪಿಸಬೇಕು. ಸಮಾಜದ ಬಾಂಧವರು ಒಗ್ಗಟ್ಟಿನಿಂದ ಸಂಘಟಿತರಾಗಿ ಅಭಿವೃದ್ಧಿಯತ್ತ ಹೆಜ್ಜೆ ಇಡಬೇಕು ಎಂದು ಶಾಸಕ ಸಿಮೆಂಟ್ ಮಂಜು ಕರೆ ನೀಡಿದರು.

ಹಾನುಬಾಳ್ ಬ್ರಹ್ಮಶ್ರೀ ನಾರಾಯಣ ಗುರು ಸಮಾಜ ಸೇವಾ ಸಂಘದ ಅಧ್ಯಕ್ಷ ಲೋಹಿತ್ ಪೂಜಾರಿ, ಹಿಂದು ಹಿತರಕ್ಷಣಾ ವೇದಿಕೆ ಅಧ್ಯಕ್ಷ ರಘು, ತಾಲೂಕು ಬಿಲ್ಲವ ಸಂಘದ ಅಧ್ಯಕ್ಷ ಭಾಸ್ಕರ್ ರಕ್ಷಿದಿ, ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ರಮೇಶ್ ಪೂಜಾರಿ, ಹೊಂಕರಹಳ್ಳಿ ಸಂಘದ ಅಧ್ಯಕ್ಷ ಉಮಾನಾಥ್ ಸುವರ್ಣ, ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ಕೃಷ್ಣಪ್ಪ ಪೂಜಾರಿ, ಲಿಂಗಾಪುರ ಸಂಘದ ಅಧ್ಯಕ್ಷ ಜಯಾನಂದ್ ಮತ್ತಿತರರಿದ್ದರು.

# ಶಾಸಕ ಸ್ವರೂಪ್ ವಿರುದ್ಧ ಸುಳ್ಳು ಸುದ್ದಿ: ಗ್ರಾಮಸ್ಥರ ಖಂಡನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಾಸಕ ಹೆಚ್.ಪಿ.ಸ್ವರೂಪ್ ಅವರ ಅಭಿವೃದ್ಧಿ ಹಾಗೂ ಏಳಿಗೆ ಸಹಿಸದೆ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಮಾಡಲಾಗುತ್ತಿದೆ ಎಂದು ತಾಲ್ಲೂಕಿನ ಮಾರಿಗುಡಿ ಕೊಪ್ಪಲು ಗ್ರಾಮಸ್ಥರು ಹೇಳಿದ್ದಾರೆ.

ಸಮುದಾಯ ಭವನ ಉದ್ಘಾಟನಾ ಸಮಾರಂಭಕ್ಕೆ ಬಂದಿದ್ದ ಶಾಸಕ ಹೆಚ್.ಪಿ.ಸ್ವರೂಪ್ ಅವರಿಗೆ ಗ್ರಾಮಸ್ಥರು ತರಾಟೆಗೆ ತೆಗೆದುಕೊಂಡರು ಎಂಬರ್ಥದ ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಶಾಸಕರ ವಿರುದ್ಧ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ದೂರು ದಾಖಲಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಬಗ್ಗೆ ಗ್ರಾಮದಲ್ಲಿ ಸಭೆ ನಡೆಸಿ ಮಾತನಾಡಿದ ಮುಖಂಡರು, ಶಾಸಕ ಹೆಚ್.ಪಿ.ಸ್ವರೂಪ್ ಭಾಗವಹಿಸಿದ್ದ ಸಮಾರಂಭದಲ್ಲಿ ಯಾವುದೋ ವಿಚಾರವಾಗಿ ನಡೆದ ವಾಗ್ವಾದವನ್ನು ಕೆಲವು ಕಿಡಿಗೇಡಿಗಳು ತಪ್ಪಾಗಿ ಬಿಂಬಿಸಿ ಶಾಸಕರ ಹೆಸರನ್ನು ಹಾಳು ಮಾಡುವ ಕೆಲಸ ಮಾಡುತ್ತಿದ್ದಾರೆಂದರು.



ಜನಪರ ಕೆಲಸಗಳ ಮೂಲಕ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಾಸಕರು ನಮ್ಮ ಗ್ರಾಮಕ್ಕೂ ಕೋಟ್ಯಾಂತರ ರೂಪಾಯಿ ಅನುದಾನದಲ್ಲಿ ಹಲವು ಕಾಮಗಾರಿ ಮಾಡಿದ್ದಾರೆ. ಅದನ್ನು ಸಹಿಸದೆ ಕೆಲವು ಕಿಡಿಗೇಡಿಗಳು ಹಿಂಬದಿಯಿಂದ ವಿಡಿಯೊ ಮಾಡಿ ಅವರ ಹೆಸರನ್ನು ಹಾಗೂ ಗ್ರಾಮದ ಹೆಸರನ್ನು ಕೆಡಿಸುವ ಹುನ್ನಾರ ಮಾಡಿದ್ದಾರೆ ಎಂದು ದೂರಿದರು.

ಗುದ್ದಲಿ ಪೂಜೆ ಹಿನ್ನೆಲೆಯಲ್ಲಿ ಕೇವಲ ಗ್ರಾಮಸ್ಥರು ಮಾತ್ರವಲ್ಲ ಸುತ್ತಮುತ್ತಲ ನಾಲ್ಕೈದು ಹಳ್ಳಿಗಳ ಜನರು ಆಗಮಿಸಿದ್ದರು. ಅದರಲ್ಲಿ ವಿರೋಧ ಪಕ್ಷಗಳ ಮುಖಂಡರು ಇದ್ದರು. ಇಂತಹ ಹೀನ ಕೃತ್ಯ ಮಾಡಿ ಶಾಸಕರ ಹೆಸರನ್ನು ಹಾಳು ಮಾಡಲು ಯತ್ನಿಸುತ್ತಿದ್ದಾರೋ ಅಂತಹವರ ವಿರುದ್ಧ ಪೊಲೀಸ್ ಠಾಣೆಗೆ ದೂರು ನೀಡಲಾಗುವುದು ಎಂದರು.

ಈ ರೀತಿಯ ಅಪಪ್ರಚಾರ ಸರಿಯಲ್ಲ ಒಳ್ಳೆ ರೀತಿಯ ಕೆಲಸ ಮಾಡುವ ಜನಪ್ರತಿನಿಧಿಗಳಿಗೆ ಬೆಂಬಲ ನೀಡಬೇಕು ಅದನ್ನು ಬಿಟ್ಟು ಇಲ್ಲಸಲ್ಲದ ಆರೋಪಗಳನ್ನು ಮಾಡಿ ಹೆಸರು ಕೆಡಿಸುವ ಪರಿಯನ್ನು ನಾವು ಒಪ್ಪುವುದಿಲ್ಲ. ಶಾಸಕರಿಗೆ ನಮ್ಮ ಗ್ರಾಮಕ್ಕೆ ಅಭಿವೃದ್ಧಿ ಕೆಲಸಗಳಿಗೆ ಬಂದಾಗ ವಿಡಿಯೊ ಮಾಡಿ ಹೆಸರು ಕೇಳಿಸುವ ಕೆಲಸ ಮಾಡಿರುವುದಕ್ಕೆ ಗ್ರಾಮದ ಪರವಾಗಿ ನಾವು ಕ್ಷಮೆ ಕೇಳುತ್ತೇವೆಂದು ಹೇಳಿದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ವೆಂಕಟೇಶ್, ಹರ್ಷ, ಸುರೇಶ್, ಮಂಜೇಗೌಡ, ಶಿವು, ಮೊಗಣ್ಣ ಬಂಗಾರಿ, ನಾಗ, ಅನಿಲ್, ಪ್ರಕಾಶ್, ಕಿರಣ್ ಮಹಾಂತೇಶ್, ಕೃಷ್ಣನ್ ಕುಮಾರ್, ಶರತ್ ಚಂದ್ರಕಾಂತ ಇತರರು ಇದ್ದರು.

# ಮಕ್ಕಳ ಮನಸ್ಥಿತಿ ಅರಿತು ಶಿಕ್ಷಕ-ಪೋಷಕರು ಬದಲಾಗಿ

## ಸದ್ಗುರು ಶ್ರೀ ಮಧುಸೂದನ ಸಾಯಿ ಅಭಿಮತ I ಹಾಸನದಲ್ಲಿ ದಿವ್ಯ ಸಂಜೆ ಸಂವಾದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಈಗಿನ ಕಾಲದ ಮಕ್ಕಳಿಗೆ ಎಲ್ಲವೂ ಬೇಗ ಅರ್ಥವಾಗುತ್ತದೆ. ಅವರ ವರ್ತನೆಯು ನಿರಂತರ ಮಾನವ ವಿಕಸನದ ಒಂದು ಭಾಗ. ಅವರು ಬದಲಾಗಲು ಸಾಧ್ಯವಿಲ್ಲ, ಶಿಕ್ಷಕರು ಮತ್ತು ಪೋಷಕರು ಅದನ್ನು ಅರ್ಥಮಾಡಿಕೊಂಡು ಬದಲಾಗಬೇಕಿದೆ ಎಂದು ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ನಗರದ ನಂದಗೋಕುಲ ಕನ್ವೆನ್ಷನ್ ಹಾಲ್‌ನಲ್ಲಿ ಮಂಗಳವಾರ ದಿವ್ಯ ಸಂಜೆ ಸಂವಾದದಲ್ಲಿ ಪತ್ರಕರ್ತ ಸುದರ್ಶನ ಚನ್ನಂಗಿಹಳ್ಳಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಈಗಿನ ಮಕ್ಕಳಿಗೆ ಭಯ ಇಲ್ಲ. 15 ನಿಮಿಷಗಳಿಗಿಂತಲೂ ಹೆಚ್ಚಿನ ಏಕಾಗ್ರತೆ ಅವರಲ್ಲಿ ನಿಲ್ಲುವುದು ಕಷ್ಟ. ಅವರು ಹೆಚ್ಚು ಪ್ರಶ್ನೆಗಳನ್ನು ಕೇಳುತ್ತಾರೆ. ಅವರ ಮನಸ್ಸು ಅರ್ಥ ಮಾಡಿಕೊಂಡು ನಾವು ಸಮಾಧಾನದಿಂದ ಉತ್ತರಿಸಿದರೆ ಬದಲಾವಣೆ ಖಂಡಿತ ಸಾಧ್ಯವಿದೆ ಎಂದರು.

ಮಕ್ಕಳನ್ನು ಬೆಳೆಸಲು ಪೋಷಕರು ಹೆಚ್ಚು ಗಮನಕೊಡುತ್ತಿಲ್ಲ ಎನ್ನುವುದು ವಿಷಾದಕರ ಸತ್ಯ. ಶಿಕ್ಷಕರೂ ಅಷ್ಟೇ, ಕೇವಲ ತರಗತಿಯ ಪಾಠದಿಂದ ಕಲಿಕೆ ಸಾಧ್ಯವಿಲ್ಲ ಎನ್ನುವುದನ್ನು ಅರಿತುಕೊಳ್ಳಬೇಕು. ನನ್ನ ಪ್ರಕಾರ ಬದಲಾಗಬೇಕಿರುವುದು ಮಕ್ಕಳಲ್ಲ, ಪೋಷಕರು ಮತ್ತು ಶಿಕ್ಷಕರು ಎಂದು ಅಭಿಪ್ರಾಯಪಟ್ಟರು.



ಸಮಾಜದಲ್ಲಿ ಬದಲಾವಣೆ ಬರಲು ಶಿಕ್ಷಣ ವ್ಯವಸ್ಥೆ ಸುಧಾರಿಸಬೇಕು. ಇದು ಸಾಧ್ಯವಾಗಲು ನೀತಿ ಪಾಠ ಮತ್ತೆ ಶಿಕ್ಷಣ ವ್ಯವಸ್ಥೆಯ ಭಾಗವಾಗಬೇಕು. ಶಾಲಾ ಚಟುವಟಿಕೆಗಳಲ್ಲಿ ಪೋಷಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ವಿಶ್ವವಿದ್ಯಾಲಯಗಳಲ್ಲಿ ಕೌಶಲ ಆಧರಿತ ಶಿಕ್ಷಣಕ್ಕೆ ಒತ್ತು ಸಿಗಬೇಕು. ಇಂದಿನ ಉದ್ಯೋಗಿಗಳ ಪೈಕಿ ಶೇ. 92 ರಷ್ಟು ಮಂದಿಯ ಓದಿಗೂ-ಕೆಲಸಕ್ಕೂ ಸಂಬಂಧವೇ ಇಲ್ಲ ಎಂದು ವಿವರಿಸಿದರು.

ವೈವಿಧ್ಯತೆ ನಮ್ಮ ದೇಶದ ನಿಜವಾದ ಶಕ್ತಿ. ಇಂಥ ದೇಶ ಜಗತ್ತಿನಲ್ಲಿ ಎಲ್ಲಿಯೂ ಇಲ್ಲ. ಹಲವು ಆಕ್ರಮಣಗಳ ನಂತರವೂ ದೇಶದಲ್ಲಿ ಅಧ್ಯಾತ್ಮ ಮರೆಯಾಗಲಿಲ್ಲ. ಪ್ರಗತಿಯ ಅರ್ಥವನ್ನು ಸರಿಯಾಗಿ ವ್ಯಾಖ್ಯಾನಿಸಬೇಕು. ರಾವಣನಂಥ ರಾಕ್ಷಸ ಸ್ವರ್ಣಲಂಕೆ ನಿರ್ಮಿಸಿಕೊಂಡಿದ್ದ. ಅದನ್ನು ಪ್ರಗತಿ ಎನ್ನಲು ಸಾಧ್ಯವೇ. ಇಂದಿಗೂ ಜನರು ರಾಮರಾಜ್ಯವನ್ನಷ್ಟೇ ನೆನಪಿಸಿಕೊಳ್ಳುತ್ತಾರೆ. ಸರ್ವಾಂಗೀಣ ಪ್ರಗತಿಗೆ ನಾವು ಒತ್ತು ಕೊಡಬೇಕು ಎಂದರು.

### ಜೀವನ ಶಿಕ್ಷಣ ಕೊಟ್ಟ ಸಂಸ್ಥೆ

ಶ್ರೀ ಸತ್ಯ ಸಾಯಿ ಗುರುಕುಲಂ ಸಮೂಹ ಶಿಕ್ಷಣ ಸಂಸ್ಥೆಗಳ ಹಿರಿಯ ವಿದ್ಯಾರ್ಥಿ, ಅರಸೀಕೆರೆ ತಾಲ್ಲೂಕಿನ ಕೆ.ಎಂ.ಮೋಹನ್‌ಕುಮಾರ್ ಮಾತನಾಡಿ, ಅತ್ಯಂತ ಬಡಕುಟುಂಬದಿಂದ ಬಂದವನು ನಾನು. ಉನ್ನತ ಶಿಕ್ಷಣವು ನನ್ನ ಪಾಲಿಗೆ ಕನಸಷ್ಟೇ ಆಗಿತ್ತು. ಆದರೆ ಇಂದು ಸಂಸ್ಥೆಯು ನನಗೆ ಸರ್ವವನ್ನೂ ಕೊಟ್ಟಿದೆ. ನಿಸ್ವಾರ್ಥ ಸೇವೆ, ದೇಶಭಕ್ತಿ ಮತ್ತು ಸಮಾಜ ಸೇವೆಯ ಮನೋಭಾವ ರೂಪಿಸಿದೆ. ಅದಕ್ಕೂ ಮಿಗಿಲಾಗಿ ಒಬ್ಬ ನಾಯಕನನ್ನಾಗಿ ಬೆಳೆಸುತ್ತಿದೆ ಎಂದು ವಿವರಿಸಿದರು.

ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ವೇದಘೋಷದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಶಾಸಕ ಹೆಚ್. ಕೆ.ಸುರೇಶ್, ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಅಶೋಕ್ ಆಲೂರು, ಹಾಸನ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ತಾರಾನಾಥ್, ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ ಬಿ.ಎನ್.ನರಸಿಂಹಮೂರ್ತಿ ಉಪಸ್ಥಿತರಿದ್ದರು. ಟಿ.ಸಿ.ಪ್ರವೀಣ್ ಕುಮಾರ್ ನಿರೂಪಿಸಿದರು.

### ಸೇವಾಯಜ್ಞಕ್ಕೆ ಎಲ್ಲರೂ ಕೈಜೋಡಿಸೋಣ

ಗೌರಿಗದ್ದೆಯ ಅವಧೂತ ವಿನಯ್ ಗುರೂಜಿ ಪ್ರಾಸ್ತಾವಿಕವಾಗಿ ಮಾತನಾಡಿ, ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಒಂದು ಮಠ, ಮಂದಿರದ ಚೌಕಟ್ಟು ಹಾಕಿಕೊಂಡು ಆರಾಮಾಗಿ ಇರಬಹುದು. ಆದರೆ ಅವರು ಕಳೆದ 12 ವರ್ಷಗಳಿಂದ ಅಕ್ಷರಶಃ ಹಗಲಿರುಳು ಶ್ರಮಿಸುತ್ತಿದ್ದಾರೆ. ಅದು ಯಜ್ಞ, ಕೇವಲ ಒಂದು ಬದುಕು ಅಲ್ಲ ಎಂದು ವಿವರಿಸಿದರು.

ಮುದ್ದೇನಹಳ್ಳಿಯಲ್ಲಿ ಸದ್ಗುರುಗಳು ಮಕ್ಕಳ ಮಿದುಳು ವಿಕಾಸಗೊಳಿಸುವ ಕೆಲಸ ಮಾಡುತ್ತಿದ್ದಾರೆ. ರಾಜಕೀಯದ ಅಧಿಕಾರಕ್ಕೆ ಅವಧಿ ಇರಬಹುದು ಆದರೆ ಧರ್ಮಕ್ಕೆ ಎಂದಿಗೂ ಅವಧಿ ಇರುವುದಿಲ್ಲ. ಭಾರತೀಯ ಪರಂಪರೆಯು ದಾನಕ್ಕೆ ಹೆಚ್ಚು ಒತ್ತು ಕೊಟ್ಟಿದೆ.

ಹೀಗಾಗಿ ಮುದ್ದೇನಹಳ್ಳಿಯಲ್ಲಿ ಹೂಡಿಕೆ ಮತ್ತು ಪ್ರತಿಫಲ ಎನ್ನುವ ಲೆಕ್ಕಾಚಾರ ಇಲ್ಲ. ಅಲ್ಲಿ ವಿದ್ಯೆಯ ಮೂಲಕ ಸಮಾಜ ಪರಿವರ್ತನೆಯ ಮಹಾನ್ ಕೆಲಸ ನಡೆಯುತ್ತಿದೆ ಎಂದರು.

ಸದ್ಗುರುಗಳಿಂದ ಸಂಸ್ಕಾರ ಪಡೆದ ಮಕ್ಕಳು ಸಕ್ರಿಯರಾಗಿ ಕೆಲಸ ಆರಂಭಿಸಿದ ನಂತರ ಇಡೀ ಜಗತ್ತು ಹೇಗೆ ಬದಲಾಗುತ್ತದೆ ಎನ್ನುವುದನ್ನು ನೋಡಲು ನಾನು ಕಾಯುತ್ತಿದ್ದೇನೆ. ಮಕ್ಕಳಿಗೆ ಆಶ್ರಯ, ಆರೋಗ್ಯ ಮತ್ತು ಅಕ್ಷರದ ಜೊತೆಗೆ ಪರಿಸರ ಹಾಗು ರಾಷ್ಟ್ರಭಕ್ತಿಯನ್ನೂ ಸ್ವಾಮಿ ಕಲಿಸುತ್ತಿದ್ದಾರೆ ಎಂದರು.

# ಹಳೇಬೀಡಿನಲ್ಲಿ ರಸ್ತೆ ಬದಿ ಅಂಗಡಿಗಳ ತೆರವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಳೇಬೀಡು: ಹೊಯ್ಸಳೇಶ್ವರ ದೇವಾಲಯದ ಕಾಂಪೌಂಡ್ ಪಕ್ಕದಲ್ಲಿದ್ದ ಗೂಡಂಗಡಿಗಳನ್ನು ಗ್ರಾಮ ಪಂಚಾಯಿತಿಯಿಂದ ಎತ್ತಂಗಡಿ ಮಾಡಿಸಲಾಯಿತು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹಳೇಬೀಡಿಗೆ ಆಗಮಿಸಿದ್ದಾಗ ದೇವಾಲಯ ಸುತ್ತ ಆವರಿಸಿರುವ ಗೂಡಂಗಡಿ ತೆರವು ಮಾಡಬೇಕು. ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ವ್ಯವಹಾರ ಮಾಡುವಂತಿಲ್ಲ ಎಂದು ಸುಪ್ರಿಂ ಕೋರ್ಟ್ ಆದೇಶ ನೀಡಿದೆ ಎಂದು ಜಿಲ್ಲಾಧಿಕಾರಿ ಸೂಚಿಸಿದ್ದರು.

ಸಕಲೇಶಪುರ ಉಪ ವಿಭಾಗಾಧಿಕಾರಿ ತಿಮ್ಮಣ್ಣ ಹುಲುಮನಿ ಹಳೇಬೀಡಿಗೆ ಆಗಮಿಸಿ 10 ದಿನದಲ್ಲಿ ಗೂಡಂಗಡಿ ತೆರವು ಮಾಡಬೇಕು ಎಂದು ಅಂಗಡಿ ಮಾಲೀಕರಿಗೆ ಗಡುವು ನೀಡಿದ್ದರು.

ಗ್ರಾಮ ಪಂಚಾಯಿತಿ ಸಿಬ್ಬಂದಿ ಜೊತೆಯಲ್ಲಿ ಪುರಾತತ್ವ ನೌಕರರು ತೆರವು ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ಹೊಯ್ಸಳೇಶ್ವರ ದೇವಾಲಯ ಸುತ್ತ ಸ್ವಚ್ಛತೆ ಕಾಪಾಡುವುದರೊಂದಿಗೆ ಜಿಲ್ಲಾಧಿಕಾರಿ ಆದೇಶ ಪಾಲಿಸುವ ಉದ್ದೇಶದಿಂದ ಅಂಗಡಿಗಳನ್ನು ತೆರವು ಮಾಡಲಾಗಿದೆ. ಹೊಯ್ಸಳೇಶ್ವರ ದೇವಾಲಯಕ್ಕೆ ಹೊಂದಿಕೊಂಡಂತೆ ಅಂಗಡಿ ಇಡಬಾರಾದು ಎಂದು ಪಿಡಿಒ ಎಸ್.ಸಿ.ವಿರೂಪಾಕ್ಷ ಹೇಳಿದರು.

ಹಿರಿಯ ನಾಗರೀಕರ ವೇದಿಕೆಯ ಕಚೇರಿಯ ಶೆಲ್ಟರ್ ತೆರವು ಮಾಡಲು ಹಿರಿಯ ನಾಗರೀಕರು ನಿರಾಕರಿಸಿದರು.

# ವೀರಭದ್ರೇಶ್ವರಸ್ವಾಮಿ ಕೆಂಡೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಳೇಬೀಡು: ಅಡಗೂರಿನಲ್ಲಿ ವೀರಭದ್ರೇಶ್ವರಸ್ವಾಮಿ ಕೆಂಡೋತ್ಸವ ವಿಜೃಂಭಣೆಯಿಂದ ನೆರವೇರಿತು.

ವೀರಭದ್ರೇಶ್ವರ ಸ್ವಾಮಿಯೊಂದಿಗೆ, ಗ್ರಾಮದ ದೇವತೆಗಳಾದ ಕಲ್ಲೇಶ್ವರಸ್ವಾಮಿ, ದೇವಿರಮ್ಮ, ಮಾರಮ್ಮ ಹಾಗೂ ಚೌಡಮ್ಮ ದೇವತೆಗಳನ್ನು ಮೆರವಣಿಗೆಯಲ್ಲಿ ಗ್ರಾಮದ ದೊಡ್ಡ ಕೆರೆಗೆ ಕರೆ ತರಲಾಯಿತು. ಕೆರೆಯ ಬಳಿ ಗಂಗಾಪೂಜೆ ನೆರವೇರಿಸಲಾಯಿತು. ನಂತರ ಕಳಸ ಹೊತ್ತ ಬಾಲಕಿ ಹಾಗೂ ಮಹಿಳೆಯರು ಮೆರವಣಿಗೆಯಲ್ಲಿ ಸಾಗಿದರು. ಪಲ್ಲಕ್ಕಿ ಹೊತ್ತವರು ವಾದ್ಯದ ತಾಳದ ಲಯಕ್ಕೆ ಹೆಜ್ಜೆ ಹಾಕಿದರು. ಕೆಂಡ ಹರಡಿದ್ದ ಹೊಂಡದ ಸುತ್ತ ಅಷ್ಟ ದಿಕ್ಕುಗಳಲ್ಲಿ ನೈವೇದ್ಯ ಸಮರ್ಪಿಸಿ ಕೆಂಡದ ಹೊಂಡಕ್ಕೆ ಪೂಜೆ ಸಮರ್ಪಿಸಲಾಯಿತು. ದೇವತೆಗಳನ್ನು ಹೊತ್ತವರ ಹಿಂದೆ ಕಳಸ ಹೊತ್ತ ಮಹಿಳೆಯರು ಕೆಂಡದ ಮೇಲೆ ನಡೆದು ಭಕ್ತಿ ಸಮರ್ಪಿಸಿದರು. ನಂತರ ನೆರದಿದ್ದ ಜನರು ಶ್ರದ್ಧಾ ಭಕ್ತಿಯಿಂದ ಕೆಂಡಹಾಯ್ದು ಪುನೀತರಾದರು.

ಶಕ್ತಿಗೆ ಹೆಸರಾದ ವೀರಭದ್ರೇಶ್ವರ ಸ್ವಾಮಿ ತಪ್ಪಿತಸ್ಥರನ್ನು ಶಿಕ್ಷಿಸುತ್ತಾರೆ. ಭಕ್ತಿಯಿಂದ ನಡೆದುಕೊಂಡವರಿಗೆ ಇಷ್ಟಾರ್ಥಗಳನ್ನು ಸಿದ್ದಿಸುತ್ತಾರೆ ಎಂಬುದು ಜನರ ನಂಬಿಕೆಯಾಗಿದೆ. ಹೀಗಾಗಿ ನೆರದಿದ್ದ ಭಕ್ತರು ಶುದ್ದವಾಗಿ ಶ್ರದ್ದೆಯಿಂದ ಪಾಲ್ಗೊಂಡಿದ್ದರು.

ವಿವಿಧ ಊರಿನಿಂದ ಆಗಮಿಸಿದ ಭಕ್ತರು ನೂಕು ನುಗ್ಗಲಿನಲ್ಲಿ ವೀರಭದ್ರೇಶ್ವರಸ್ವಾಮಿಯ ದರ್ಶನ ಪಡೆದು, ಹಣ್ಣು ಕಾಯಿ ಪೂಜೆ ಮಾಡಿಸಿದರು. ನೆರದಿದ್ದ ಭಕ್ತರಿಗೆ ದಾಸೋಹದ ವ್ಯವಸ್ಥೆ ಮಾಡಲಾಗಿತ್ತು.

# ಚೌಡೇನಹಳ್ಳಿಯಲ್ಲಿ ರೇಷ್ಮೆ ಕೃಷಿ ತರಬೇತಿ ಯಶಸ್ವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಾಸನದ ಕಾರೇಕೆರೆ ಕೃಷಿ ಮಹಾವಿದ್ಯಾಲಯದ ಬಿಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿ ಚೌಡೇನಹಳ್ಳಿಯಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ರೈತರಿಗೆ ರೇಷ್ಮೆ ಹುಳು ಸಾಕಾಣಿಕೆ ಹಾಗೂ ಹಿಪ್ಪುನೇರಳೆ ಬೆಳೆಯ ಕೀಟ ಮತ್ತು ರೋಗಗಳ ನಿರ್ವಹಣೆ ಕುರಿತು ತರಬೇತಿ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ತಾಲ್ಲೂಕು ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಟಿ.ಸುನಿಲ್ ಕುಮಾರ್ ಅವರು ರೇಷ್ಮೆ ಕೃಷಿಯಲ್ಲಿ ಕಂಡುಬರುವ ಪ್ರಮುಖ ಕೀಟ ಹಾಗೂ ರೋಗಗಳ ಕುರಿತು ಮಾಹಿತಿ ನೀಡಿದರು.

ಹಿಪ್ಪುನೇರಳೆ ಬೆಳೆಗೆ ಬಾಧಿಸುವ ವಿವಿಧ ಕೀಟ ಮತ್ತು ರೋಗಗಳ ಲಕ್ಷಣಗಳನ್ನು ಪ್ರಾಯೋಗಿಕವಾಗಿ ಕೀಟ ಹಾಗು ರೋಗಬಾಧಿತ ಮಾದರಿಗಳನ್ನು ತೋರಿಸುವ ಮೂಲಕ ವಿವರಿಸಲಾಯಿತು. ಥ್ರಿಪ್ಸ್ ಮತ್ತು ಮಿಟ್‌ಗಳ ಬಾಧೆಯನ್ನು ಗುರುತಿಸುವುದು, ಪರಸ್ಪರ ಗುರುತಿಸಿ ವ್ಯತ್ಯಾಸ ತಿಳಿಯುವ ವಿಧಾನಗಳನ್ನು ರೈತರಿಗೆ ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಲಾಯಿತು.



ಕೀಟಗಳ ನಿಯಂತ್ರಣಕ್ಕೆ ರೋಗರ್, ಪೋಶನ್, ಶುಚಿ, ವಿಜಯೇತ ಮುಂತಾದ ರಾಸಾಯನಿಕ ನಿರ್ವಹಣಾ ಕ್ರಮ ಹಾಗು ಹಳದಿ ಜಿಗುಟು ಬಲೆ, ಹಸಿರು ಜಾಲರಿ ಮುಂತಾದ ಯಾಂತ್ರಿಕ ನಿರ್ವಹಣಾ ವಿಧಾನಗಳ ಬಳಕೆಯ ಬಗ್ಗೆ ಮಾಹಿತಿ ನೀಡಿದರು. ಪ್ರತಿ ಕೀಟ ಹಾಗು ರೋಗಕ್ಕೆ ಸೂಕ್ತವಾದ ನಿರ್ವಹಣಾ ಕ್ರಮವನ್ನು ಸಮಯಕ್ಕೆ ಸರಿಯಾಗಿ ಕೈಗೊಳ್ಳುವಂತೆ ಸಲಹೆ ನೀಡಿದರು.

### ರೇಷ್ಮೆಗೆ ಕಾಡುತ್ತಿದೆ ಉಜಿ ನೊಣ

ಚೌಡೇನಹಳ್ಳಿ ಭಾಗದಲ್ಲಿ ರೇಷ್ಮೆ ಹುಳು ಸಾಕಾಣಿಕೆಗೆ ಉಜಿ ನೊಣ ಅಡ್ಡಿಯಾಗುತ್ತಿದೆ. ನೊಣದ ನಿಯಂತ್ರಣವನ್ನು ಒಬ್ಬೊಬ್ಬ ರೈತರು ಪ್ರತ್ಯೇಕವಾಗಿ ಕೈಗೊಳ್ಳುವುದಕ್ಕಿಂತ ಸಮುದಾಯದ ಎಲ್ಲಾ ಬೆಳೆಗಾರರು ಒಗ್ಗಟ್ಟಿನಿಂದ ಕೈಗೊಳ್ಳುವ ಸಮುದಾಯ ಆಧಾರಿತ ನಿರ್ವಹಣಾ ಕ್ರಮ ಪರಿಣಾಮಕಾರಿ ಎಂದು ಸುನಿಲ್‌ಕುಮಾರ್ ತಿಳಿಸಿದರು.

ಉಜಿ ನೊಣದ ಕೋಶಾವಸ್ಥೆಯನ್ನು ನಿಯಂತ್ರಿಸಲು ಹಾನಿಕಾರಕವಲ್ಲದ ಪರೋಪಜೀವಿ ಕಣಜವಾದ ನೆಸೊಲಿಂಕ್ಸ್ ಥೈಮಸ್ ಬಳಸಬೇಕು. ಇದು ಪೌಚ್‌ಗಳ ರೂಪದಲ್ಲಿ ಲಭ್ಯವಿದ್ದು, ಉಜಿ ನೊಣದ ಕೋಶಗಳ ಮೇಲೆ ಪರೋಪಜೀವಿಯಾಗಿ ಕಾರ್ಯನಿರ್ವಹಿಸುವ ಮೂಲಕ ಅದರ ಸಂಖ್ಯೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಎಂದರು.

ಗುಣಮಟ್ಟದ ಹಿಪ್ಪುನೇರಳೆ ಎಲೆಗಳ ಉತ್ಪಾದನೆಯು ಉತ್ತಮ ರೇಷ್ಮೆ ಹುಳು ಸಾಕಾಣಿಕೆ ಮತ್ತು ಗುಣಮಟ್ಟದ ಗೂಡು ಉತ್ಪಾದನೆಗೆ ಪ್ರಮುಖವಾದುದರಿಂದ ರೈತರು ಗಮನಹರಿಸಬೇಕು. ರೇಷ್ಮೆ ಹುಳುಗಳ ಆರೋಗ್ಯ, ಬೆಳವಣಿಗೆ ಮತ್ತು ಗೂಡು ಉತ್ಪಾದನೆಯನ್ನು ಸುಧಾರಿಸುವ ಉದ್ದೇಶದಿಂದ ಸೆರಿಸಂಪೂರ್ಣ ಹಾಗೂ ಸೆರಿಮೋರ್ ಮುಂತಾದ ಉತ್ಪನ್ನಗಳ ಬಳಕೆಯ ಕುರಿತು ಕೂಡ ಮಾಹಿತಿ ನೀಡಲಾಯಿತು.

ರೇಷ್ಮೆ ಕೃಷಿಕರು ಹಾಗೂ ಗ್ರಾಮಸ್ಥರು ಭಾಗವಹಿಸಿ ಕೀಟ ಮತ್ತು ರೋಗಗಳ ಗುರುತಿಸುವಿಕೆ, ನಿಯಂತ್ರಣ ಕ್ರಮ ಮತ್ತು ಹುಳು ಸಾಕಾಣಿಕೆಯ ಸುಧಾರಿತ ನಿರ್ವಹಣಾ ವಿಧಾನಗಳ ಕುರಿತು ಮಾಹಿತಿ ಪಡೆದರು.

# ಮಳವಳ್ಳಿ ಎಸ್ಟೇಟ್ ಬಳಿ ಬೀಡುಬಿಟ್ಟ ಕಾಡಾನೆಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಬೇಲೂರು ತಾಲ್ಲೂಕು ಬಿಕ್ಕೋಡು ಹೋಬಳಿ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿ ಮುಂದುವರಿದಿದ್ದು, ಮಳವಳ್ಳಿ ಎಸ್ಟೇಟ್ ಸಮೀಪದ ಕಾಫಿ ತೋಟಗಳಲ್ಲಿ ಬೀಡುಬಿಟ್ಟಿರುವುದು ರೈತರು ಹಾಗೂ ಕೂಲಿ ಕಾರ್ಮಿಕರಲ್ಲಿ ಆತಂಕ ಮೂಡಿಸಿದೆ.

ಮಳವಳ್ಳಿ ಎಸ್ಟೇಟ್ ಬಳಿಯ ಬೇಲೂರು ಅರ್ಬನ್ ಬ್ಯಾಂಕ್ ಉಪಾಧ್ಯಕ್ಷ ಸತೀಶ್ ಹಾಗೂ ಭುವನೇಶಯ್ಯ ಅವರಿಗೆ ಸೇರಿದ ಕಾಫಿ ತೋಟಗಳಲ್ಲಿ ಕಾಡಾನೆಗಳ ಹಿಂಡು ನಿರಂತರವಾಗಿ ಸಂಚರಿಸುತ್ತಿದ್ದು,



ಹಗಲು ವೇಳೆಯಲ್ಲಿಯೇ ತೋಟಗಳಲ್ಲಿ ಕಾಣಿಸಿಕೊಳ್ಳುತ್ತಿವೆ ಎನ್ನಲಾಗಿದೆ. ತೋಟದ ಕೆಲಸಗಳಿಗೆ ತೆರಳುವ ಕೂಲಿ ಕಾರ್ಮಿಕರು ಜೀವಭಯದಿಂದ ಹಿಂದೇಟು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಾರ್ಮಿಕರು ಒಂಟಿಯಾಗಿ ತೋಟದೊಳಗೆ ತೆರಳಲು ಭಯಪಡುತ್ತಿದ್ದಾರೆ. ಬೆಳಗ್ಗೆ ಹಾಗು ಸಂಜೆ ವೇಳೆ ಆನೆಗಳು ತೋಟಗಳಲ್ಲೇ ಕಾಣಿಸಿಕೊಳ್ಳುತ್ತಿರುವುದರಿಂದ ಯಾವ ಸಂದರ್ಭದಲ್ಲಿ ದಾಳಿ ನಡೆಸಬಹುದು ಎಂಬ ಆತಂಕ ಕಾರ್ಮಿಕರು ಹಾಗೂ ಸ್ಥಳೀಯರನ್ನು ಕಾಡುತ್ತಿದೆ.

ಇದೇ ವೇಳೆ ಬಿಕ್ಕೋಡು ಹೋಬಳಿ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಕಾಫಿ, ಬಾಳೆ, ಅಡಿಕೆ, ಜೋಳ ಸೇರಿ ವಿವಿಧ ಬೆಳೆಗಳಿಗೆ ಹಾನಿಯಾಗುತ್ತಿರುವ ಬಗ್ಗೆ ರೈತರು ಅಳಲು ತೋಡಿಕೊಂಡಿದ್ದಾರೆ. ಕಾಡಾನೆಗಳು ತೋಟಗಳಲ್ಲೇ ಬೀಡುಬಿಟ್ಟಿರುವುದರಿಂದ ಕೃಷಿ ಚಟುವಟಿಕೆಗಳ ಮೇಲೂ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

ಕಾಡಾನೆಗಳ ನಿರಂತರ ಸಂಚಾರದಿಂದ ರೈತರು ಹಾಗೂ ಕಾರ್ಮಿಕರು ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದಾರೆ. ತೋಟಗಳಲ್ಲಿ ಕೆಲಸ ಮಾಡುವ ಸಂದರ್ಭದಲ್ಲಿ ಆನೆಗಳು ಎದುರಾದರೆ ಅಪಾಯ ಸಂಭವಿಸುವ ಸಾಧ್ಯತೆ ಇರುವುದರಿಂದ ಕಾರ್ಮಿಕರು ತೀವ್ರ ಎಚ್ಚರಿಕೆಯಿಂದ ಓಡಾಡುವಂತಾಗಿದೆ.

# ಬಹಿರಂಗ ಕ್ಷಮೆಯಾಚಿಸಲು ಶಾಸಕ ಸುರೇಶ್‌ಗೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಾಜಿ ಸಚಿವ ಬಿ.ಶಿವರಾಂ ಅವರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವ ಬೇಲೂರು ಶಾಸಕ ಹೆಚ್.ಕೆ.ಸುರೇಶ್ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ಗಂಡಸಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಶಿವರಾಜ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಿವರಾಮ್ ಅವರು 1989 ರಿಂದ ಗಂಡಸಿ ಶಾಸಕರಾಗಿ ಹಾಗೂ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. ಗ್ರಾಮೀಣ ಬಡ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಾಲಾ-ಕಾಲೇಜುಗಳ ಅಭಿವೃದ್ಧಿ ಸೇರಿ ಹಲವು ಕೆಲಸ ಮಾಡಿದ್ದಾರೆ. 1993ರಲ್ಲೇ ಗಂಡಸಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಸ್ಥಾಪಿಸಿದ ಕೀರ್ತಿ ಶಿವರಾಮ್ ಅವರಿಗೆ ಸಲ್ಲುತ್ತದೆ ಎಂದರು. ಶಿವರಾಂ ಅವರ ರಾಜಕೀಯ ಜೀವನ ಹಾಗೂ ಆರ್ಥಿಕ ಪರಿಸ್ಥಿತಿ ಕುರಿತು ಶಾಸಕರು ಮಾತನಾಡುವ ಮೊದಲು ತಮ್ಮ ರಾಜಕೀಯ ಹಿನ್ನಲೆ ಅರಿಯಬೇಕು. ಎರಡು ದಶಕಗಳ ಕಾಲ ಜನರ ವಿಶ್ವಾಸ ಗಳಿಸಿಕೊಂಡು ಬಂದಿರುವ ಹಿರಿಯ ರಾಜಕಾರಣಿ ಬಗ್ಗೆ ಮಾತನಾಡುವಾಗ ಎಚ್ಚರಿಕೆ ವಹಿಸಬೇಕೆಂದು ಸಲಹೆ ನೀಡಿದರು.




ಶಾಸಕರು ಕ್ಷೇತ್ರದ ಮೂಲ ಸೌಕರ್ಯಗಳತ್ತ ಗಮನ ಹರಿಸಬೇಕು. ಹಲವು ರಸ್ತೆಗಳು ಹದಗೆಟ್ಟಿದ್ದು, ರಸ್ತೆ ಗುಂಡಿ ಮುಚ್ಚಿಸುವುದು ಸೇರಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಅಭಿವೃದ್ಧಿ ವಿಚಾರದಲ್ಲಿ ತಮ್ಮೊಂದಿಗೆ ಬಹಿರಂಗ ಚರ್ಚೆಗೆ ಬರುವಂತೆ ಸವಾಲು ಹಾಕಿದರು.

# ಸೆ. 5ರಂದು ಬಂಜೆತನ ಉಚಿತ ಚಿಕಿತ್ಸಾ ಶಿಬಿರ

ಹಾಸನ: ನಗರದ ಬಿ.ಎಂ. ರಸ್ತೆಯಲ್ಲಿರುವ ರಾಜೀವ್ ಆಯುರ್ವೇದ ಆಸ್ಪತ್ರೆಯಲ್ಲಿ ಸೆ. 5ರ ಶನಿವಾರ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆ ವರೆಗೆ ಬಂಜೆತನ ಉಚಿತ ತಪಾಸಣೆ, ಸಲಹೆ ಹಾಗೂ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ಬಂಜೆತನ ಹಾಗೂ ಗರ್ಭಧಾರಣೆಯ ಸಮಸ್ಯೆಗಳಿಗೆ ನುರಿತ ಆಯುರ್ವೇದ ಪ್ರಸೂತಿ ಮತ್ತು ಸ್ತ್ರೀ ರೋಗ ಚಿಕಿತ್ಸಾ ತಜ್ಞ ವೈದ್ಯರು ತಪಾಸಣೆ, ಸಲಹೆ ಹಾಗೂ ಚಿಕಿತ್ಸೆ ನೀಡಲಿದ್ದಾರೆ. ಗರ್ಭಧಾರಣೆಯ ಸಮಸ್ಯೆಗಳಿಗೆ ಆಹಾರ ಕ್ರಮ, ಪಥ್ಯ, ವ್ಯಾಯಾಮ, ಆಪ್ತ ಸಮಾಲೋಚನೆ, ಮಾರ್ಗದರ್ಶನವನ್ನು ಪಡೆಯಬಹುದಾಗಿದೆ. ಮಾಹಿತಿಗೆ 08172-296663, 7899200672 ಇಲ್ಲಿಗೆ ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಂಶುಪಾಲ ಡಾ. ಎಸ್.ಎ.ನಿತಿನ್ ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-03

1783: ಅಮೆರಿಕದ ಸ್ವಾತಂತ್ರ್ಯ ಸಮರಕ್ಕೆ ಅಧಿಕೃತ ಅಂತ್ಯ ಹಾಡಿದ ಪ್ಯಾರಿಸ್ ಒಪ್ಪಂದಕ್ಕೆ ಬ್ರಿಟನ್ ಮತ್ತು ಅಮೆರಿಕ ಸಹಿ ಹಾಕಿದವು. ಬ್ರಿಟನ್, ಅಮೆರಿಕದ ಸ್ವಾತಂತ್ರ್ಯವನ್ನು ಅಧಿಕೃತವಾಗಿ ಮಾನ್ಯ ಮಾಡಿತು.

1838: ಅಮೆರಿಕದ ಪ್ರಸಿದ್ಧ ಗುಲಾಮಗಿರಿ ವಿರೋಧಿ ಹೋರಾಟಗಾರ ಫ್ರೆಡರಿಕ್ ಡಗ್ಲಸ್ ಗುಲಾಮಗಿರಿಯಿಂದ ತಪ್ಪಿಸಿಕೊಂಡು ಸ್ವಾತಂತ್ರ್ಯ ಪಡೆದರು. ನಂತರ ಅವರು ಪ್ರಮುಖ ಸಮಾಜ ಸುಧಾರಕರಾದರು.

1939: ಜರ್ಮನಿ ಪೋಲೆಂಡ್ ಮೇಲೆ ದಾಳಿ ಮಾಡಿದ ಹಿನ್ನೆಲೆಯಲ್ಲಿ ಬ್ರಿಟನ್ ಮತ್ತು ಫ್ರಾನ್ಸ್ ಜರ್ಮನಿಯ ವಿರುದ್ಧ ಯುದ್ಧ ಘೋಷಿಸಿದವು. ಇದರಿಂದ ದ್ವಿತೀಯ ವಿಶ್ವಯುದ್ಧ ಮತ್ತಷ್ಟು ವ್ಯಾಪಕವಾಯಿತು.

1967: ಸ್ವೀಡನ್‌ನಲ್ಲಿ ವಾಹನಗಳು ರಸ್ತೆಯ ಎಡಭಾಗದಲ್ಲಿ ಸಂಚರಿಸುವುದರಿಂದ ಬಲಭಾಗಕ್ಕೆ ಬದಲಾಯಿಸಲಾಯಿತು. ಈ ಐತಿಹಾಸಿಕ ಬದಲಾವಣೆಯನ್ನು ಡಿಡಾಗೆನ್ ಎಚ್‌ಟಿ ಎಂದು ಕರೆಯಲಾಗುತ್ತದೆ.

1976: ನಾಸಾದ ವೈಕಿಂಗ್2 ಬಾಹ್ಯಾಕಾಶ ನೌಕೆ ಮಂಗಳ ಗ್ರಹದ ಮೇಲ್ಮೈಯಲ್ಲಿ ಯಶಸ್ವಿಯಾಗಿ ಇಳಿಯಿತು. ಮಂಗಳಗ್ರಹದ ಅಧ್ಯಯನದಲ್ಲಿ ಇದು ಮಹತ್ವದ ಮೈಲಿಗಲ್ಲಾಯಿತು.

# ಚ.ರಾ.ಪಟ್ಟಣ ಗುತ್ತಿಗೆದಾರರ ಸಂಘದಿಂದ 2 ಲಕ್ಷ ರೂ ನೆರವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಇತ್ತೀಚೆಗೆ ನಿಧನರಾದ ತಾಲ್ಲೂಕು ಗುತ್ತಿಗೆದಾರರ ಸಂಘದ ಸದಸ್ಯ ಪರಮ ಎನ್. ಕೃಷ್ಣೇಗೌಡ ಅವರ ಕುಟುಂಬಕ್ಕೆ ಸಂಘದಿಂದ 2 ಲ.ರೂ. ಮರಣವಂತಿಕೆ ಮೊತ್ತದ ಚೆಕ್ ವಿತರಿಸಲಾಯಿತು.

ಪರಮ ಎನ್.ಕೃಷ್ಣೇಗೌಡರ ನಿಧನಕ್ಕೆ ಸಂತಾಪ ಸೂಚಿಸಿದ ಸಂಘದ ಪದಾಧಿಕಾರಿಗಳು, ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ಮೃತರ ಪತ್ನಿ ಸುನಂದಮ್ಮ ಅವರಿಗೆ ಚೆಕ್ ಹಸ್ತಾಂತರಿಸಿದರು. ರಾಜ್ಯ ಸಂಘಟನಾ ಕಾರ್ಯದರ್ಶಿ ಎಸ್.ಬಿ.ಜಗದೀಶ್ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.



ಸಂಘದ ಕಾರ್ಯಕಾರಿ ಮಂಡಳಿ ಅಧ್ಯಕ್ಷ ಸಿ.ಬಿ.ಗಂಗಾಧರ್, ಗೌರವಾಧ್ಯಕ್ಷ ಬಿ.ಹೆಚ್.ಶಿವಣ್ಣ, ಕಾರ್ಯದರ್ಶಿ ಶಿವರಾಜ್, ಖಜಾಂಚಿ ಎನ್.ಬಿ.ಸೋಮಶೇಖರ್, ಉಪಾಧ್ಯಕ್ಷ ಎ.ಜೆ.ಲಕ್ಕೇಗೌಡ, ಹೆಚ್. ಎನ್.ರವಿ, ಸಹ ಕಾರ್ಯದರ್ಶಿ ಎನ್.ನಿಂಗೇಗೌಡ, ನಿರ್ದೇಶಕರಾದ ಚೆಲುವೇಗೌಡ, ಜಯಶಂಕರ್, ಸುಬ್ಬೇಗೌಡ ಉಪಸ್ಥಿತರಿದ್ದರು.

# ಹಣದ ವಿಚಾರಕ್ಕೆ ಗಲಾಟೆ: ವ್ಯಕ್ತಿ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಜೆ.ಸಿ.ಪುರ ಗ್ರಾಮದಲ್ಲಿ ಹಣಕಾಸಿನ ವಿಚಾರಕ್ಕೆ ಶುರುವಾದ ಗಲಾಟೆಯಲ್ಲಿ ಗಂಭೀರ ಗಾಯಗೊಂಡಿದ್ದ ವ್ಯಕ್ತಿ ಮೃತಪಟ್ಟಿದ್ದಾರೆ.

ಗ್ರಾಮದ ಮನ್ಸೂರ್ ಪಾಷಾ ಮೃತರು. ಸನಾವುಲ್ಲಾ ಹಾಗೂ ಜರೀನಾ ಬಾನು ಆರೋಪಿಗಳು. ಸ್ನೇಹಿತ ಸನಾವುಲ್ಲಾಗೆ ಮನ್ಸೂರ್ ಪಾಷ ಒಂದು ವರ್ಷದ ಹಿಂದೆ 40 ಲಕ್ಷ ರೂ. ಸಾಲ ನೀಡಿದ್ದರು ಎನ್ನಲಾಗಿದೆ. ಅದೇ ಗ್ರಾಮದಲ್ಲಿ ಮೃತರ ಪತ್ನಿ ನಜ್ಮಾ ಅವರ ಅಕ್ಕ ಅಸೀಯಾ ತಬಸುಂ ವಾಸವಿದ್ದು ಮನ್ಸೂರ್ ಪಾಷ ಆಗಾಗ ಅಲ್ಲಿಗೆ ಬರುತ್ತಿದ್ದ. ಅವರ ಮನೆ ಹತ್ತಿರದಲ್ಲೇ ಇದ್ದ ಸನಾವುಲ್ಲಾ ಮನೆಗೆ ತೆರಳಿ ಸಾಲದ ಹಣ ಕೊಡುವಂತೆ ಕೇಳುತ್ತಿದ್ದ. ಹಲವು ದಿನಗಳಿಂದ ಹಣಕಾಸಿನ ವಿಚಾರವಾಗಿ ಇಬ್ಬರ ನಡುವೆ ವಾಗ್ವಾದ ನಡೆಯುತ್ತಿತ್ತು ಎನ್ನಲಾಗಿದೆ.

ಸೋಮವಾರ ಮಧ್ಯಾಹ್ನ ಮನ್ಸೂರ್ ಪಾಷ ಸಂಬಂಧಿ ಅಸೀಯಾ ಅವರ ಮನೆಗೆ ಬಂದಿದ್ದಾಗ ತನ್ನ ಮನೆಗೆ ಕರೆಸಿಕೊಂಡಿದ್ದ ಸನಾವುಲ್ಲಾ, ನಿನಗೆ ನಾನು ಯಾವ ಹಣ ಕೊಡಬೇಕು. ಎಲ್ಲರ ಮುಂದೆ ಹೀಗೆ ಹೇಳಿಕೊಂಡು ಬರುತ್ತಿದ್ದೀಯ ಎಂದು ಪ್ರಶ್ನಿಸಿದ್ದ. ಸಾಲದ ಹಣ ಕೇಳುತ್ತಿದ್ದೇನೆಂದು ಮನ್ಸೂರ್ ಹೇಳುತ್ತಿದ್ದಂತೆ ಇಬ್ಬರ ನಡುವೆ ವಾಗ್ವಾದ ನಡೆದಿದೆ ಎಂದು ತಿಳಿದುಬಂದಿದೆ.

ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಸನಾವುಲ್ಲಾ ಹಾಗೂ ಜರೀನಾ ಬಾನು ಒಟ್ಟಾಗಿ ಮನ್ಸೂರ್‌ನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಜಗಳ ಬಿಡಿಸಲು ಬಂದ ಅಸೀಯಾ ಅವರ ಚಿಕ್ಕಮ್ಮ ಭಾತೀನಾ ಖಾನಂ, ಮಹಮ್ಮದ್ ಫೈಜ್ ಅವರನ್ನು ತಳ್ಳಾಡಿದ್ದಾರೆ. ಘಟನೆಯಲ್ಲಿ ಮಹಮ್ಮದ್‌ನ ತಲೆಗೆ ರಕ್ತಗಾಯವಾಗಿದೆ.

ಅಷ್ಟಕ್ಕೆ ಸುಮ್ಮನಾಗದ ದಂಪತಿ ಮನ್ಸೂರ್ ಪಾಷ ಅವರ ಮರ್ಮಾಂಗಕ್ಕೆ ಒದ್ದಿದ್ದರಿಂದ ಸ್ಥಳದಲ್ಲೇ ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ತಕ್ಷಣವೇ ಅವರನ್ನು ತಾಲ್ಲೂಕು ಆಸ್ಪತ್ರೆಗೆ ಕರೆದುಕೊಂಡು ಬರಲಾಯಿತಾದರೂ ವೈದ್ಯರು ಮೃತಪಟ್ಟಿರುವುದನ್ನು ದೃಢಪಡಿಸಿದ್ದಾರೆ. ಬಾಣಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248